# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋವಿಡ್ -19 ಸೋಂಕು ಹಿನ್ನೆಲೆ ರಾಜ್ಯಾದ್ಯಂತ 2021ನೇ ಬಕ್ರೀದ್ ಹಬ್ಬ ಆಚರಿಸುವ ಬಗ್ಗೆ ಸೂಕ್ತ ನಿರ್ದೇಶನ ನೀಡುವ ಕುರಿತು.

ಓದಲಾಗಿದೆ: 1. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ, ಭಾರತ ಸರ್ಕಾರ ನವದೆಹಲಿ ಇವರ ಅಧಿಕೃತ ಜ್ಞಾಪನ ದಿನಾಂಕ: 01-03-2021.

2. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರವರ ಸುತ್ತೋಲೆ ಸಂಖ್ಯೆ:ಆಕುಕ 216 ಅಮುಕಾ 2021, ದಿನಾಂಕ:03-07-2021

3. ಕಂದಾಯ ಇಲಾಖೆಯ ಸುತ್ತೋಲೆ ಸಂಖ್ಯೆ:RD 158 TNR 2020, Dt:03-07-2021 & 04-07-2021.

ಪ್ರಸ್ತಾವನೆ:

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮುಸ್ಲಿಂ ಬಾಂಧವರ ಎರಡನೇ ಪ್ರಮುಖ ಹಬ್ಬವಾದ 2021ನೇ ಸಾಲಿನ ಬಕ್ರೀದ್ ಹಬ್ಬವನ್ನು ಜುಲೈ-21ನೇ ತಾರೀಖಿನಂದು ಆಚರಿಸಲಾಗುವುದೆಂದು ರಾಜ್ಯದ ಹಿಲಾಲ್ ಸಮಿತಿ ಘೋಷಿಸಿರುತ್ತದೆ. ಅಂದು ಈದ್ಗಾ ಮೈದಾನದಲ್ಲಿ ಅಥವಾ ಸ್ಥಳೀಯ ಮಸೀದಿಗಳಲ್ಲಿ ಬೆಳಗ್ಗೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸುವುದು ಧಾರ್ಮಿಕ ಕರ್ತವ್ಯಗಳಲ್ಲಿ ಒಂದಾಗಿರುತ್ತದೆ.

ಬಕ್ರೀದ್ ದಿನದ ಸಾಮೂಹಿಕ ಪ್ರಾರ್ಥನೆ ಸಾಮಾನ್ಯವಾಗಿ ಈದ್ಗಾಗಳಲ್ಲಿ ನಿರ್ವಹಿಸುವಂತಹ ಪರಿಪಾಟವಿರುತ್ತದೆ. ಒಂದು ವೇಳೆ ಈದ್ಗಾಗಳಲ್ಲಿ ಪ್ರಾರ್ಥನೆ ಮಾಡಲು ಕಾನೂನು ಸುವ್ಯವಸ್ಥೆ/ಮಳೆ ಅಥವಾ ಇತರೆ ಯಾವುದೇ ತೊಡಕುಗಳಿದ್ದಲ್ಲಿ, ಅಂತಹ ಸಂದರ್ಭಗಳಲ್ಲಿ ಹಾಗೂ ಒಂದು ವೇಳೆ ಈದ್ಗಾ ಇಲ್ಲದಂತಹ ಪ್ರದೇಶಗಳಲ್ಲಿ ಸಾಮಾನ್ಯವಾಗಿ ಮಸೀದಿಗಳಲ್ಲಿ ನಮಾಜ್ ಮಾಡಲಾಗುತ್ತದೆ.

ಮೇಲೆ ಓದಲಾದ (1), (2) ಮತ್ತು (3)ರ ಸುತ್ತೋಲೆ ದಿನಾಂಕ:01-03-2021, 03-07-2021 ಹಾಗೂ 04-07-2021 ರಲ್ಲಿ SOP ಮಾರ್ಗ ಸೂಚಿಗಳನ್ನು ಹೊರಡಿಸಲಾಗಿದೆ. ರಾಜ್ಯದೆಲ್ಲೆಡೆ ಕೋವಿಡ್-19 ಅನ್‌ಲಾಕ್ ಪ್ರಕ್ರಿಯೆ ಜಾರಿಯಲ್ಲಿದ್ದರೂ ಸೋಂಕು ಹರಡುವಿಕೆಯನ್ನು ತಡೆಗಟ್ಟಲು ಹೆಚ್ಚಿನ ಜಾಗರೂಕತೆಯನ್ನು ಅನುಸರಿಸುವ ಅನಿವಾರ್ಯತೆಯಿರುತ್ತದೆ. ಮುಂಬರುವ ದಿನಗಳಲ್ಲಿ ಸಂಭಾವ್ಯ 3ನೇ ಅಲೆಯನ್ನು ಸಮರ್ಪಕವಾಗಿ ನಿರ್ವಹಿಸುವ ನಿಟ್ಟಿನಲ್ಲಿ ಪರಿಸ್ಥಿತಿಯನ್ನು ಪರಿಣಾಮಕಾರಿಯಾಗಿ ಎದುರಿಸಲು ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ ಇವರ ಅಧಿಕೃತ ಜ್ಞಾಪನದಲ್ಲಿ ಯಾವುದೇ ಪ್ರದೇಶದಲ್ಲಿ ದೊಡ್ಡ ಸಂಖ್ಯೆಯ ಜನರು ಒಟ್ಟು ಗೂಡುವುದನ್ನು ನಿಷೇಧಿಸಲಾಗಿದೆ. ಸಾಮಾನ್ಯವಾಗಿ ಈದ್ಗಾಗಳು ಹೆಚ್ಚಿನ ಸಂಖ್ಯೆಯಲ್ಲಿ ನಿರ್ದಿಷ್ಟವಾದಂತಹ ಯಾವುದೇ ಒಂದು ಮಸೀದಿಯ ಅಥವಾ ಆಡಳಿತ ಮಂಡಳಿಯ ಅಧೀನದಲ್ಲಿ ಇಲ್ಲದೇ ಇರುವ ಹಿನ್ನೆಲೆಯಲ್ಲಿ ಸಾಮೂಹಿಕ ಅಂತರ, ಸಾಮಾಜಿಕ ಅಂತರ ಮತ್ತು ಇತರೆ ಸೋಂಕು ಹರಡದಿರುವಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವುದು ಕಷ್ಟ ಸಾಧ್ಯವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಈದ್ಗಾಗಳಲ್ಲಿ ಬಕ್ರೀದ್ ದಿನ ಸಾಮೂಹಿಕ ಪ್ರಾರ್ಥನೆಯನ್ನು ನಿರ್ಬಂಧಿಸಿದ್ದು ಸಡಿಲಿಸಿ ಬಕ್ರೀದ್ ಸಾಮೂಹಿಕ ಪ್ರಾರ್ಥನೆಯನ್ನು ನಿರ್ವಹಿಸಲು ಇಚ್ಛಿಸಿದ್ದಲ್ಲಿ ಈಗಾಗಲೇ ದಿನಾಂಕ:01-03-2021 ರಂದು ಹೊರಡಿಸಿರುವಂತಹ ಕೆಲವು SOP ಮಾರ್ಗಸೂಚಿಗಳ ಷರತ್ತಿಗೊಳಪಟ್ಟು ಮಸೀದಿಗಳಲ್ಲಿ ಮಾತ್ರ ಕನಿಷ್ಠ ಭಕ್ತಾದಿಗಳೊಂದಿಗೆ ಪ್ರಾರ್ಥನೆ ನಿರ್ವಹಿಸಲು ಅವಕಾಶವಿರುತ್ತದೆ. ಆದರೆ, ಮಸೀದಿಯಲ್ಲಿ ಸಾಮೂಹಿಕ ಪ್ರಾರ್ಥನೆ ನಿರ್ವಹಿಸುವ ಮೊದಲು ಆಡಳಿತ ಮಂಡಳಿ ಮುನ್ನೆಚ್ಚರಿಕೆ ಕ್ರಮವನ್ನು ಕೈಗೊಳ್ಳಬೇಕಾಗಿರುತ್ತದೆ ಹಾಗೂ ಬಕ್ರಿದ್ ಹಬ್ಬದ ಆಚರಣೆ/ಧಾರ್ಮಿಕ ಚಟುವಟಿಕೆ ಸಂದರ್ಭಗಳಲ್ಲಿ ಪ್ರಾಣಿ ವಧೆ ಮತ್ತು ಬಲಿದಾನ ಪ್ರಕ್ರಿಯೆಗೆ ಸೂಕ್ತ ಮಾರ್ಗದರ್ಶನ ನೀಡುವ ಅಗತ್ಯವಿರುತ್ತದೆ.

.........2

Scanned with CamScanner

ಆದ್ದರಿಂದ, ರಾಜ್ಯಾದ್ಯಂತ 2021ನೇ ಸಾಲಿನ ಬಕ್ರಿದ್ ಹಬ್ಬ ಆಚರಣೆಗಾಗಿ ಹಾಗೂ ಪ್ರಾಣಿ ವಧೆ ಮತ್ತು ಬಲಿದಾನ ಪ್ರಕ್ರಿಯೆಗೆ ಸೂಕ್ತ ಮಾರ್ಗದರ್ಶನ ನೀಡುವ ಸಲುವಾಗಿ ಈ ಕೆಳಕಂಡಂತೆ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: MWD 02 MDS 2020, ಬೆಂಗಳೂರು, ದಿನಾಂಕ:16-07-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021 ರ ಜುಲೈ-21 ರಂದು ಬಕ್ರೀದ್ ಹಬ್ಬದ (Eid-ul-Azha) ದಿನ ಈದ್ಗಾಗಳಲ್ಲಿ ಬಕ್ರೀದ್ ಹಬ್ಬದ ಸಾಮೂಹಿಕ ಪ್ರಾರ್ಥನೆಯನ್ನು ನಿರ್ಬಂಧಿಸಿದ್ದು, ಮಸೀದಿಗಳಲ್ಲಿ ಸಾಮೂಹಿಕ ಪ್ರಾರ್ಥನೆ ನಿರ್ವಹಿಸಲು ಇಚ್ಛಿಸಿದ್ದಲ್ಲಿ ದಿನಾಂಕ:01-03-2021, 03-07-2021 ಹಾಗೂ 04-07-2021 ರ ಆದೇಶದನ್ವಯ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು, ಆಯಾ ಮಸೀದಿಗಳಲ್ಲಿ 50 ಜನರು ಮೀರದಂತೆ ಈ ಕೆಳಕಂಡ ಕೋವಿಡ್ ಮಾರ್ಗಸೂಚಿಗಳನ್ನು ಅನುಸರಿಸಿ ಸಾಮೂಹಿಕ ಪ್ರಾರ್ಥನೆ ನಿರ್ವಹಿಸಬಹುದು. ಒಂದು ವೇಳೆ ಅಧಿಕ ಜನಸಂಖ್ಯೆ ಆಗಮಿಸಿದ್ದಲ್ಲಿ ಪಂತಿಗಳಂತೆ (Batch wise ) ಕೋವಿಡ್ ಮಾರ್ಗಸೂಚಿಗಳನ್ನು ಅನುಸರಿಸಿ ಆಯಾ ಮಸೀದಿಗಳಲ್ಲಿ ನಮಾಜ್ ನಿರ್ವಹಿಸಲು ಹಾಗೂ ಬಕ್ರಿದ್ ಹಬ್ಬದ ಆಚರಣೆ/ಧಾರ್ಮಿಕ ಚಟುವಟಿಕೆ ಸಂದರ್ಭಗಳಲ್ಲಿ ಪ್ರಾಣಿವಧೆ ಮತ್ತು ಬಲಿದಾನ ಪ್ರಕ್ರಿಯೆ ಸಂದರ್ಭದಲ್ಲಿ ಈ ಕೆಳಕಂಡ ಅಂಶಗಳನ್ನು ತಪ್ಪದೇ ಪಾಲಿಸಲು ನಿರ್ದೇಶನ ನೀಡಲಾಗಿದೆ.

1. ಪ್ರಾರ್ಥನಾ ಸ್ಥಳಗಳಲ್ಲಿ ಮಾಸ್ಕನ್ನು ಕಡ್ಡಾಯವಾಗಿ ಹಾಕತಕ್ಕದ್ದು.
2. 65 ವರ್ಷಕ್ಕಿಂತ ಮೇಲ್ಪಟ್ಟ ವ್ಯಕ್ತಿಗಳು ಹಾಗೂ 10 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಮನೆಯಲ್ಲಿ ಪ್ರಾರ್ಥನೆ ಮಾಡುವುದು.
3. ನಮಾಜ್ ನಿರ್ವಹಿಸುವವರ ಮಧ್ಯ ಕನಿಷ್ಠ 6 ಅಡಿ ಅಂತರ ಕಾಯ್ದುಕೊಳ್ಳುವುದು.
4. ಮಸೀದಿಗಳಲ್ಲಿ ಪ್ರವೇಶಿಸುವ ಮೊದಲು ದೇಹದ ತಾಪಮನಾವನ್ನು ತಪಾಸಣೆ ಮಾಡುವುದು.
5. ಕೈಗಳನ್ನು ಸೋಪು ಅಥವಾ ಸ್ಯಾನಿಟೈಜರ್‌ನಿಂದ ಶುಚಿಗೊಳಿಸುವುದು.
6. ತಮ್ಮ ಮನೆಗಳಿಂದ ಮುಸಲ್ಲಾವನ್ನು (ಜಾಯನಮಾಜ್) ಕಡ್ಡಾಯವಾಗಿ ತರುವುದು.
7. ಹಸ್ತಲಾಘವ ಮತ್ತು ಆಲಿಂಗನ ಮಾಡದಿರಲು ಸೂಚಿಸುವುದು.

**ಪ್ರಾಣಿ ವಧೆ ಮತ್ತು ಬಲಿದಾನ ಮಾಡುವ ಪ್ರಕ್ರಿಯೆಗೆ ಈ ಕೆಳಕಂಡ ಸ್ಥಳಗಳಲ್ಲಿ ನಿಷೇಧಿಸಿದೆ:-**

1. ರಸ್ತೆಗಳು, ಪಾದಚಾರಿ ಮಾರ್ಗಗಳು.
2. ಎಲ್ಲಾ ರೀತಿಯ ಆಸ್ಪತ್ರೆ ಆವರಣಗಳು, ನರ್ಸಿಂಗ್ ಹೋಂ ಒಳ ಹಾಗೂ ಹೊರ ಆವರಣಗಳು.
3. ಶಾಲೆ ಕಾಲೇಜುಗಳು ನಡೆಯುತ್ತಿದ್ದಲ್ಲಿ, ಅಂತಹ ಶಾಲೆ/ಕಾಲೇಜುಗಳ ಒಳ ಹಾಗೂ ಹೊರ ಆವರಣಗಳು.
4. ಆಟದ ಮೈದಾನಗಳಲ್ಲಿ, ಮಸೀದಿಗಳ ಹಾಗೂ ಇತರೆ ಧಾರ್ಮಿಕ ಸ್ಥಳ ಹಾಗೂ ಆವರಣಗಳಲ್ಲಿ.
5. ಉದ್ಯಾನವನಗಳ ಒಳಗೆ ಮತ್ತು ಹೊರಗೆ ಅಥವಾ ಇನ್ನಾವುದೇ ಸಾರ್ವಜನಿಕ ಪ್ರದೇಶಗಳಲ್ಲಿ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

H. A.
16/7/2021
(ಮುಕ್ತಾರ್ ಪಾಷ, ಹೆಚ್.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ.

ಗೆ:

1) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ನೃಪತುಂಗ ರಸ್ತೆ, ಬೆಂಗಳೂರು.

..........3

Scanned with CamScanner